# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 25 :2020–21 ದಿನಾಂಕ: 25.10.2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020–21, ದಿ.16.04.2021ರ ಆದೇಶದಂತೆ ದಿ.25.10.2021 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ಸಭೆಯ ನಡವಳಿಗಳು:–**

ಸಭೆಗೆ ಹಾಜರಾಗಿದ್ದವರ ವಿವರಗಳು:–

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಡಾ॥ವರುಣ್ | ಕೋವಿಡ್ ಮೆಡಿಕಲ್ ಆಫೀಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 4 | ಶ್ರೀ.ಚಂದ್ರಶೇಖರ್ | ಸಹಾಯಕ ಕಾರ್ಯಪಾಲಕ ಅಭಿಯಂತರರು, ರಾಜಕಾಲುವೆ ವಿಭಾಗ |
| 5 | ಶ್ರೀ.ಅಮರನಾಥ್ | ಸಹಾಯಕ ಅಭಿಯಂತರರು, ರಾಜಕಾಲುವೆ ವಿಭಾಗ |
| 6 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 7 | ಶ್ರೀ.ಬಿ.ಟಿ.ಲಕ್ಷ್ಮಿ ವೆಂಕಟೇಶ್ | ಮುನಿಕೊಂಡಪ್ಪ ಬಡಾವಣೆ, ನಾಗರೀಕ ಕ್ಷೇಮಾಭಿವೃದ್ದಿ ಸಂಘ |
| 8 | ಶ್ರೀ.ವೇಣುಗೋಪಾಲ್ | ನಾಗರೀಕ ಹಿತ ರಕ್ಷಣಾ ಸಮಿತಿ |
| 9 | ಶ್ರೀ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ದಿ ಸಂಘ |
| 10 | ಶ್ರೀ.ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 11 | ಶ್ರೀ.ಮುದ್ದಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ |
| 12 | ಶ್ರೀ.ರಾಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ, ಭುವನೇಶ್ವರಿನಗರ |
| 13 | ಶ್ರೀ.ರಾಮಪ್ರಸಾದ್ | ನಾಗರೀಕ ಹಿತ ರಕ್ಷಣಾ ಸಮಿತಿ, ಸಿದ್ದೇಶ್ವರ ಬಡಾವಣೆ |
| 14. | ಶ್ರೀ.ಮೂರ್ತಿ | ನಾಗರೀಕ ಹಿತ ರಕ್ಷಣಾ ಸಮಿತಿ, ಸೌಂದರ್ಯ ಬಡಾವಣೆ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ದಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

## ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯ 100 ಹಳ್ಳಿಗಳಲ್ಲಿ ಒಂದಾದ ಸೀಡೆದಹಳ್ಳಿ ಭಾಗದಲ್ಲಿ ಅಸಮರ್ಪಕ ನೀರು ಸರಬರಾಜಿನ ಬಗ್ಗೆ ಚರ್ಚಿಸಲಾಯಿತು ಹಾಗೂ ನೀರಿನ ವಾಲ್ವವಗಳನ್ನು ಅಸಮರ್ಪಕವಾಗಿ ಅಳವಡಿಸಿರುವುದರಿಂದ ಹಾಗೂ ಮ್ಯಾನ್‌ಹೋಲ್‌ಗಳನ್ನು ರಸ್ತೆಯ ಮೇಲ್ಮೈನಿಂದ ಕೆಲವು ಕಡೆ ಎತ್ತರದಲ್ಲಿ ಹಾಗೂ ಕೆಲವು ಕಡೆ ರಸ್ತೆಯ ಮೇಲ್ಮೈನಿಂದ ಕೆಳಗಡೆ ನಿರ್ಮಿಸಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗಿರುವ ಕುರಿತು ವಾರ್ಡ್ ಸಮಿತಿ ಸದಸ್ಯರು, ವಾರ್ಡ್ ಸಮಿತಿಯ ಗಮನಕ್ಕೆ ತಂದರು. ಈ ಕುರಿತು ಹಲವಾರು ಬಾರಿ ಸಂಬಂಧಪಟ್ಟವರ ಗಮನಕ್ಕೆ ತಂದಿದ್ದರು ಸಹ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಿಂದ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಹಾಗೂ ಜವಾಬ್ದಾರಿಯುತ ಅಭಿಯಂತರರು/ ಅಧಿಕಾರಿಗಳು ಸಭೆಗಳಿಗೆ ಹಾಜರಾಗದಿರುವ ಬಗ್ಗೆ ವಿವರವಾಗಿ ಚರ್ಚಿಸಿದ ನಂತರ ಜವಾಬ್ದಾರಿಯುತ ಅಭಿಯಂತರರು/ಅಧಿಕಾರಿಗಳು ಸಭೆಗೆ ಹಾಜರಾಗಲು ನಿರ್ದೇಶಿಸುವಂತೆ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಪತ್ರ ಬರೆಯಲು ತಿಳಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾ-14/ಸದಸ್ಯ ಕಾರ್ಯದರ್ಶಿ

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 7330 |
| ಬಿಡುಗಡೆಯಾದ ಪ್ರಕರಣಗಳು | 7185 |
| ಸಕ್ರಿಯ ಪ್ರಕರಣಗಳು | 05 |
| ಮರಣ | 140 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. |

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಅಸಮರ್ಪಕವಾಗಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ತಮ್ಮ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಂಬಂಧಿಸಿದಂತೆ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಬೃಹತ್ ಮಳೆ ನೀರುಗಾಲುವೆ ಬಗ್ಗೆ:**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಬೃಹತ್ ಮಳೆನೀರು ಗಾಲುವೆ ಕೈಗೊಂಡಿರುವ ಕಾಮಗಾರಿಗಳ ಕುರಿತು ಚರ್ಚಿಸಲಾಯಿತು. ವಾರ್ಡ್ ಸಮಿತಿ ಸದಸ್ಯರು ಬಾಗಲಗುಂಟೆ ವ್ಯಾಪ್ತಿಯ ರಾಯಲ್ ಎನ್‌ಕ್ಲೇವ್ & ಬಿ.ಟಿ.ಎಸ್ ಬಡಾವಣೆಯಲ್ಲಿನ ಮಳೆನೀರು ಚರಂಡಿಗಳಲ್ಲಿನ ಹೂಳನ್ನು ತೆಗೆಯಲು ಕ್ರಮವಹಿಸಬೇಕೆಂದು ಕೋರಿದರು. ಸಭೆಯಲ್ಲಿ ಈ ಕುರಿತು ವಿವರವಾಗಿ ಚರ್ಚಿಸಿ ನಗರದಲ್ಲಿ ಇತ್ತೀಚಿಗೆ ಭಾರಿ ಪ್ರಮಾಣದಲ್ಲಿ ಮಳೆ ಆಗುತ್ತಿದ್ದು, ಮಳೆಯಿಂದ ಉಂಟಾಗುವ ಅನಾಹುತಗಳನ್ನು ತಡೆಯಲು ಕೂಡಲೇ ಮಳೆ ನೀರು ಚರಂಡಿಯಲ್ಲಿನ ಹೂಳನ್ನು ತೆಗೆಯಲು

ಹಾಗೂ ಭುವನೇಶ್ವರಿ ನಗರದ ಗಣೇಶ್ ಸುಬ್ರಮಣ್ಯ ದೇವಸ್ಥಾನದ ಹತ್ತಿರ ಕಲ್ವರ್ಟ್ ನಿರ್ಮಿಸುವುದರ ಬಗ್ಗೆ ಚರ್ಚಿಸಲಾಯಿತು.

ಕ್ರಮ:ಸ.ಅ/ಸ.ಕಾ.ನಿ.ಅ(ಬೃಹತ್ ಮಳೆ ನೀರುಗಾಲುವೆ)

- **ಇತರೆ ವಿಷಯಗಳ ಬಗ್ಗೆ.**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳ ಬಗ್ಗೆ ಅನಧಿಕೃತವಾಗಿ ರಸ್ತೆಯನ್ನು ಕತ್ತರಿಸುವ ಬಗ್ಗೆ, ಪಾದಚಾರಿ ಮಾರ್ಗಗಳ ಒತ್ತುವರಿ ಬಗ್ಗೆ, ವಾರ್ಡ್ ವ್ಯಾಪ್ತಿಯಲ್ಲಿ ಹೂಳು ತುಂಬಿರುವ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. ಈ ಕುರಿತು ಪರಿಶೀಲಿಸಿ ಆಧ್ಯತೆಯ ಮೇಲೆ ಕ್ರಮವಹಿಸುವುದರ ಬಗ್ಗೆ ತಿಳಿಸಲಾಯಿತು.

ದಿ.31.10.2021 ರಿಂದ 02.11.2021 ರವರೆಗೆ ಬಾಗಲಗುಂಟೆ ವಾರ್ಡ್‌ನಲ್ಲಿ ಮಾರಮ್ಮ ದೇವಿಯ ಜಾತ್ರೆಯನ್ನು ನಡೆಸಲಾಗುತ್ತಿದ್ದು, ಬಿಬಿಎಂಪಿ ವತಿಯಿಂದ ನೀರು ಸರಬರಾಜು ವ್ಯವಸ್ಥೆ, ತಾತ್ಕಾಲಿಕ ಶೌಚಾಲಯ ವ್ಯವಸ್ಥೆ, ದೇವಸ್ಥಾನದ ಸುತ್ತಮುತ್ತಲಿನ ಬಡಾವಣೆಗಳ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವುದು ಹಾಗೂ ದೇವಸ್ಥಾನದ ಅಕ್ಕಪಕ್ಕದ ಪ್ರದೇಶಗಳ ಸ್ವಚ್ಛತಾ ನಿರ್ವಹಣಾ ಕಾರ್ಯವನ್ನು ಕೈಗೊಳ್ಳಲು ತುರ್ತು ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ವಾರ್ಡ್ ನಂ.14ರ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ ಎಂಬ ಬಗ್ಗೆ ಸಂಬಂಧಿಸಿದ ವಾರ್ಡ್ ಅಭಿಯಂತರರು ತಿಳಿಸಿದರು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

28/10/21

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

28/10/2021

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಛೇರಿ ಪ್ರತಿ.